# ಕರ್ನಾಟಕ ವಿಧಾನಪರಿಷತ್ತು

ಸದಸ್ಯರ ಹೆಸರು : ಶ್ರೀ ಕೇಶವ ಪ್ರಸಾದ್ (ವಿಧಾನಸಭಾ ಕ್ಷೇತ್ರ)
ಚುಕ್ಕೆ ಗುರುತ್ತಿಲ್ಲದ ಪ್ರಶ್ನೆ ಸಂಖ್ಯೆ : 1370
ಉತ್ತರಿಸಬೇಕಾದ ಸಚಿವರು : ಮುಖ್ಯಮಂತ್ರಿ
ಉತ್ತರಿಸಬೇಕಾದ ದಿನಾಂಕ : 18.12.2025

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ. | ಅಲ್ಪಸಂಖ್ಯಾತರ ನಿರ್ದೇಶನಾಲಯದಲ್ಲಿ ಪ್ರಸ್ತುತ ರಾಜ್ಯಮಟ್ಟದ ನಿರ್ದೇಶಕರ ಹುದ್ದೆಗೆ ನೇಮಕಾತಿ ಮಾಡಲಾಗಿರುವ ಅಧಿಕಾರಿಯು. ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ನಿಯಮಿತ ಕಾರ್ಯವಿಧಾನಗಳು ಮತ್ತು ಯೋಜನೆಗಳ ಅನುಷ್ಠಾನದಲ್ಲಿ ಅಗತ್ಯ ಅನುಭವ ಮತ್ತು ಅರ್ಹತೆ ಹೊಂದಿದವರೇ ಎಂಬುದನ್ನು ಸರ್ಕಾರ ದೃಢೀಕರಿಸಿರುವುದೇ: | ಸರ್ಕಾರದ ಅಧಿಸೂಚನೆ ಸಂಖ್ಯೆ:ಸಿಆಸುಇ 245 ಆಸೇವ 2023 ದಿನಾಂಕ:20.07.2023ರನ್ವಯ ಶ್ರೀ ಜೀಲಾನಿ ಮೊಕಾಶಿ, ಜಂಟಿ ನಿರ್ದೇಶಕರು, ಕೃಷಿ ಇಲಾಖೆ ಇವರನ್ನು ಸಾರ್ವಜನಿಕ ಮತ್ತು ಆಡಳಿತಾತ್ಮಕ ದೃಷ್ಟಿಯಿಂದ ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ನಿರ್ದೇಶನಾಲಯ, ಬೆಂಗಳೂರು ಹುದ್ದೆಗೆ ಸಕ್ಷಮ ಪ್ರಾಧಿಕಾರದ ಅನುಮೋದನೆಯೊಂದಿಗೆ ವರ್ಗಾಯಿಸಿ ಆದೇಶಿಸಲಾಗಿರುತ್ತದೆ. |
| ಆ. | ಅಲ್ಪಸಂಖ್ಯಾತರ ಕಲ್ಯಾಣಕ್ಕೆ ರಾಜ್ಯ ಸರ್ಕಾರ ಒದಗಿಸಿರುವ ಅನುದಾನವು ಪರಿಣಾಮಕಾರಿಯಾಗಿ ಬಳಕೆಯಾಗುವಂತೆ ಮಾಡಲು, ನಿರ್ದೇಶಕರ ಹುದ್ದೆಗೆ ಶೀಘ್ರದಲ್ಲಿ ಐ.ಎ.ಎಸ್ ಅಥವಾ ಹಿರಿಯ ಕೆ.ಎ.ಎಸ್ ಅಧಿಕಾರಿಯನ್ನು ನೇಮಿಸುವ ಕುರಿತು ಸರ್ಕಾರ ಯಾವ ರೀತಿಯ ನಿರ್ಧಾರವನ್ನು ಕೈಗೊಂಡಿದೆ: | ಭಾ.ಆ.ಸೇ ಅಥವಾ ಕೆ.ಎ.ಎಸ್ ವೃಂದದ ಅಧಿಕಾರಿಗಳಿಗೆ ಸ್ಥಳ ನಿಯುಕ್ತಿಗೊಳಿಸಲು ಮೀಸಲಿಸಿರುವ ಭಾ.ಆ.ಸೇ ಕೇಡರೇತರ ಹುದ್ದೆಗಳಿಗೆ ಅಧಿಕಾರಿಗಳ ಲಭ್ಯತೆ ಮತ್ತು ಸಾರ್ವಜನಿಕ ಹಾಗೂ ಆಡಳಿತಾತ್ಮಕ ಹಿತದೃಷ್ಟಿಯಿಂದ ಹಾಗೂ ಸರ್ಕಾರಕ್ಕೆ ಇರುವ ಪ್ರದತ್ತವಾದ ಅಧಿಕಾರದನ್ವಯ ಆದೇಶಗಳನ್ನು ಹೊರಡಿಸಲಾಗುತ್ತದೆ. |
| ಇ. | ಭವಿಷ್ಯದಲ್ಲಿ ಇಂತಹ ಪ್ರಮುಖ ಹುದ್ದೆಗಳಿಗೆ ಕೇವಲ ಅರ್ಹತೆ ಮತ್ತು ಅನುಭವ ಹೊಂದಿದ ಹಿರಿಯ ಅಧಿಕಾರಿಗಳನ್ನು ಮಾತ್ರ ನೇಮಿಸುವಂತೆ ಕ್ರಮಕೈಗೊಳ್ಳಲು ಸರ್ಕಾರ ಯಾವ ರೀತಿಯ ನೀತಿ ಬದಲಾವಣೆ ಅಥವಾ ಮಾರ್ಗಸೂಚಿಗಳನ್ನು ರೂಪಿಸುತ್ತಿದೆ? | |

**ಸಿಆಸುಇ 626 ಆಸೇಇ 2025**

(ಸಿದ್ದರಾಮಯ್ಯ)
ಮುಖ್ಯಮಂತ್ರಿ